# All India Radio: Bangalore
# National Bulletin In Kannada
# 16.08.2026 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಇಂದು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪುಣ್ಯ ಸ್ಮರಣೆ; ಸದೈವ ಅಟಲ್ ಸ್ಮಾರಕಕ್ಕೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಗೌರವ ನಮನ
2. ಯುಜಿಸಿ-ನೆಟ್ ೨೦೨೬: ೮೫ ವಿಷಯಗಳ ಪ್ರಾಥಮಿಕ ಕೀ ಉತ್ತರ ಪ್ರಕಟಿಸಿದ ಎನ್‌ಟಿಎ
3. ಹನ್ನೆರಡನೇ ಬ್ರಿಕ್ಸ್ ಪರಿಸರ ಸಚಿವರ ಸಭೆ: ನಾಡಿದ್ದು, ನವದೆಹಲಿಯಲ್ಲಿ ಭಾರತದ ಅಧ್ಯಕ್ಷತೆಯಲ್ಲಿ ಆಯೋಜನೆ
4. ಇ-ಸ್ಪೋರ್ಟ್ಸ್ ವಿಶ್ವಕಪ್ ಚೆಸ್: ನಾರ್ವೆಯ ಮ್ಯಾಗ್ನಸ್ ಕಾರ್ಲ್‌ಸನ್ ಗೆ ವಿಶ್ವಕಪ್ ಕಿರೀಟ
5. ಭಾರತ-ಶ್ರೀಲಂಕಾ ಟೆಸ್ಟ್ ಕ್ರಿಕೆಟ್: ಎರಡನೇ ದಿನದಾಟಕ್ಕೆ ಮಳೆ ಅಡ್ಡಿ

<><><><>

ಭಾರತ ರತ್ನ ಪುರಸ್ಕೃತ, ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪುಣ್ಯ ಸ್ಮರಣೆ ದಿನವಾದ ಇಂದು ನವದೆಹಲಿಯ ಸದೈವ್ ಅಟಲ್ ಸ್ಮಾರಕದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಮಾಜಿ ಪ್ರಧಾನಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಕೇಂದ್ರ ಸಚಿವ ರಾಜನಾಥ್ ಸಿಂಗ್, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಉಪಸ್ಥಿತರಿದ್ದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ವಾಜಪೇಯಿ ಅವರ ಶಾಶ್ವತ ಪರಂಪರೆಯು ದೇಶಕ್ಕೆ ಸದಾ ಸ್ಫೂರ್ತಿಯ ಮೂಲವಾಗಿರಲಿದೆ ಎಂದು ಸ್ಮರಿಸಿದ್ದಾರೆ. ಭಾರತದ ಪ್ರಗತಿಯಲ್ಲಿ ಮಾಜಿ ಪ್ರಧಾನಿಯವರ ಪಾತ್ರ ಅಪ್ರತಿಮವಾದದ್ದು ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ಇನ್ನು ಲೋಕಸಭಾ ಸಭಾಪತಿ ಓಂ ಬಿರ್ಲಾ ಅವರು, ವಾಜಪೇಯಿ ಅವರು ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತ ರಾಷ್ಟ್ರನಿಷ್ಠೆಯ ದೃಢ ಸಂಕೇತವಾಗಿದ್ದು, ಅವರ ತತ್ತ್ವಗಳು ಭವಿಷ್ಯದಲ್ಲೂ ನಮಗೆ ಮಾರ್ಗದರ್ಶನ ನೀಡಲಿವೆ ಎಂದು ತಿಳಿಸಿದ್ದಾರೆ.

<><><><>

ಭಾರತದ ೮೦ನೇ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಶುಭ ಕೋರಿದ ಜಾಗತಿಕ ನಾಯಕರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಧನ್ಯವಾದ ತಿಳಿಸಿದ್ದಾರೆ. ಮಾಲ್ಡೀವ್ಸ್ ಅಧ್ಯಕ್ಷ ಡಾ.ಮೊಹಮ್ಮದ್ ಮುಯಿಝು ಅವರ ಸಂದೇಶಕ್ಕೆ ಪ್ರತಿಕ್ರಿಯಿಸಿರುವ ರಾಷ್ಟ್ರಪತಿ, ಉಭಯ ರಾಷ್ಟ್ರಗಳ ನಡುವಿನ ಸಹಭಾಗಿತ್ವ ನಿರಂತರವಾಗಿ ಬೆಳೆಯಲಿ ಎಂದು ಆಶಿಸಿದ್ದಾರೆ.

<><><><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು-ಎನ್‌ಟಿಎ ಜೂನ್ ೨೦೨೬ ರ ಯುಜಿಸಿ-ನೆಟ್ ಪರೀಕ್ಷೆಯ ೮೫ ವಿಷಯಗಳ ಪ್ರಾಥಮಿಕ ಕೀ ಉತ್ತರಗಳನ್ನು ಬಿಡುಗಡೆ ಮಾಡಿದೆ. ಕೀ ಉತ್ತರಗಳಿಗೆ ಆಕ್ಷೇಪಣೆ ಸಲ್ಲಿಸಲು ಇದೇ ೧೮ ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಅಭ್ಯರ್ಥಿಗಳು ಅಧಿಕೃತ ಯುಜಿಸಿ-ನೆಟ್ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಸವಾಲು ಮಾಡಬಹುದಾಗಿದೆ. ಆಕ್ಷೇಪಣೆ ಸಲ್ಲಿಸುವ ಪ್ರತಿಯೊಂದು ಪ್ರಶ್ನೆಗೆ ೨೦೦ ರೂಪಾಯಿ ಶುಲ್ಕ ನಿಗದಿಪಡಿಸಲಾಗಿದ್ದು, ಆಕ್ಷೇಪಣೆಗೆ ಸೂಕ್ತ ದಾಖಲೆಗಳನ್ನು ಲಗತ್ತಿಸುವುದು ಕಡ್ಡಾಯವಾಗಿದೆ. ಇತರೆ ಯಾವುದೇ ಮಾರ್ಗಗಳಲ್ಲಿ ಸಲ್ಲಿಸುವ ಆಕ್ಷೇಪಣೆಗಳನ್ನು ಪುರಸ್ಕರಿಸಲಾಗುವುದಿಲ್ಲ ಹಾಗೂ ಶುಲ್ಕ ಪಾವತಿಸಲು ಇದೇ ೧೮ ಕೊನೆಯ ದಿನವಾಗಿದೆ. ಇನ್ನು ಇಂಗ್ಲಿಷ್, ವಾಣಿಜ್ಯ ಮತ್ತು ಸಮಾಜ ಶಾಸ್ತ್ರ ವಿಷಯಗಳ ಪ್ರಶ್ನೆಪತ್ರಿಕೆಗಳಲ್ಲಿ ಕಂಡುಬಂದ ದೋಷಗಳ ಕುರಿತು ಪರಿಶೀಲಿಸಲು ಸಮಿತಿಯೊಂದನ್ನು ರಚಿಸಲಾಗಿತ್ತು. ಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಈ ಮೂರು ವಿಷಯಗಳಿಗೆ ಸಂಬಂಧಿಸಿದಂತೆ ಇಂದು ಪ್ರತ್ಯೇಕ ಸಾರ್ವಜನಿಕ ಪ್ರಕಟಣೆ ಹೊರಡಿಸಲಾಗುವುದು ಎಂದು ಎನ್‌ಟಿಎ

ತಿಳಿಸಿದೆ. ಅಭ್ಯರ್ಥಿಗಳು ಕೇವಲ ಅಧಿಕೃತ ವೆಬ್‌ಸೈಟ್ ಮತ್ತು ದೃಢೀಕೃತ ಸಾಮಾಜಿಕ ಜಾಲತಾಣಗಳ ಮಾಹಿತಿಯನ್ನು ಮಾತ್ರ ನಂಬುವಂತೆ ಸಂಸ್ಥೆ ಸಲಹೆ ನೀಡಿದೆ.

<><><><>

ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ರಾಷ್ಟ್ರೀಯ ಗೀತೆ 'ವಂದೇ ಮಾತರಂ' ಅನ್ನು ಕಾಂಗ್ರೆಸ್ ಪಕ್ಷ ವಿರೋಧಿಸಿದೆ ಎಂದು ಬಿಜೆಪಿ ಗಂಭೀರ ಆರೋಪ ಮಾಡಿದೆ. ನವದೆಹಲಿಯಲ್ಲಿ ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ, ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯ ವೇಳೆ ಹಿರಿಯ ನಾಯಕಿ ಸೋನಿಯಾ ಗಾಂಧಿ ಅವರು ವಂದೇ ಮಾತರಂ ಗಾಯನವನ್ನು ತಡೆಯಲು ಯತ್ನಿಸಿದರು ಎಂದು ಆರೋಪಿಸಿದರು. ಇದರ ಮೂಲಕ ಕಾಂಗ್ರೆಸ್ ರಾಷ್ಟ್ರಗೀತೆ, ಸಂವಿಧಾನ ಹಾಗೂ ದೇಶದ ಜನತೆಗೆ ಅಪಮಾನ ಮಾಡಿದೆ ಎಂದು ಅವರು ದೂರಿದ್ದಾರೆ. ಮತ್ತೊಂದೆಡೆ, ಕೇರಳದ ಕಾಂಗ್ರೆಸ್ ಸರ್ಕಾರವೂ ತನ್ನ ಅಧಿಕೃತ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಗಾಯನವನ್ನು ನಿರ್ಲಕ್ಷಿಸಿದೆ ಎಂದು ಬಿಜೆಪಿ ವಕ್ತಾರರು ಆರೋಪಿಸಿದ್ದಾರೆ. ಬಿಜೆಪಿಯ ಈ ಆರೋಪಗಳನ್ನು ಸಂಪೂರ್ಣವಾಗಿ ತಳ್ಳಹಾಕಿರುವ ಕಾಂಗ್ರೆಸ್ ವಕ್ತಾರ ಜೈರಾಮ್ ರಮೇಶ್, ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಪಕ್ಷದ ಪ್ರಧಾನ ಕಚೇರಿಯಲ್ಲಿ ವಂದೇ ಮಾತರಂ ಗೀತೆಯನ್ನು ಸಂಪೂರ್ಣವಾಗಿ ಹಾಗೂ ಗೌರವಪೂರ್ವಕವಾಗಿ ಹಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಭಾರತದ ಅಧ್ಯಕ್ಷತೆಯಲ್ಲಿ ೧೨ನೇ ಬ್ರಿಕ್ಸ್ ಪರಿಸರ ಸಚಿವರ ಸಭೆಯು ನಾಡಿದ್ದು, ೧೮ ರಂದು ನವದೆಹಲಿಯಲ್ಲಿ ನಡೆಯಲಿದೆ. ಈ ಉನ್ನತ ಮಟ್ಟದ ಸಭೆಗೂ ಮುನ್ನ, ನಾಳೆ ಪರಿಸರ ಕಾರ್ಯಕಾರಿ ಗುಂಪು ಹಾಗೂ ಹವಾಮಾನ ಬದಲಾವಣೆ ಮತ್ತು ಸುಸ್ಥಿರ ಅಭಿವೃದ್ಧಿಯ ಸಂಪರ್ಕ ಗುಂಪಿನ ಬ್ರಿಕ್ಸ್ ಹಿರಿಯ ಅಧಿಕಾರಿಗಳ ಸಭೆ ಜರುಗಲಿದೆ. 'ಸದೃಢತೆ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ' ಎಂಬ ಭಾರತದ ಅಧ್ಯಕ್ಷತೆಯ ಮುಖ್ಯ ಆಶಯದಡಿಯಲ್ಲಿ ಈ ಕಾರ್ಯಕ್ರಮ ಆಯೋಜನೆಗೊಂಡಿದ್ದು, ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರು ಈ ಪರಿಸರ ಸಚಿವರ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಗ್ರ ಜಾಗತಿಕ ಚರ್ಚೆಗಳು ಹಾಗೂ ಪರಿಸರ ಸಹಕಾರವನ್ನು ಬಲಪಡಿಸಲು ಈ ಸಭೆ ಸೂಕ್ತ ವೇದಿಕೆ ಕಲ್ಪಿಸಲಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ತಿಳಿಸಿದೆ. ಈ ಬಾರಿಯ ಅಧ್ಯಕ್ಷತೆಯ ಭಾಗವಾಗಿ ಭಾರತವು ಬ್ರಿಕ್ಸ್ ಪರಿಸರ ಕಾರ್ಯಕಾರಿ ಗುಂಪಿನಡಿ ನಾಲ್ಕು ಪ್ರಮುಖ ಆದ್ಯತೆಯ ಕ್ಷೇತ್ರಗಳನ್ನು ಗುರುತಿಸಿದೆ. ಸುಸ್ಥಿರ ಜೀವನಶೈಲಿಯ ಉತ್ತೇಜನ, ಅರಣ್ಯೀಕರಣ, ಕಾಡ್ಗಿಚ್ಚು ನಿರ್ವಹಣೆ ಮತ್ತು ವಿಕೋಪ ಸ್ಥಿತಿಸ್ಥಾಪಕತ್ವ, ವೃತ್ತಾಕಾರದ ಆರ್ಥಿಕತೆ ಹಾಗೂ ಹವಾಮಾನ ಬದಲಾವಣೆಗೆ ಹೊಂದಿಕೊಳ್ಳುವಿಕೆಯ ವಿಷಯಗಳ ಮೇಲೆ ಈ ಸಭೆಯಲ್ಲಿ ಹೆಚ್ಚಿನ ಗಮನಹರಿಸಲಾಗುವುದು.

<><><><>

ಕೇರಳದ ಅತಿ ದೊಡ್ಡ ಹಬ್ಬ 'ತಿರುವೋಣಂ' ಇದೇ ೨೬ ರಂದು ನಡೆಯಲಿದ್ದು, ಇಂದು 'ಅತ್ತಂ' ಆಚರಣೆಯೊಂದಿಗೆ ಹಬ್ಬದ ಸಂಭ್ರಮಕ್ಕೆ ಅಧಿಕೃತ ಚಾಲನೆ ಸಿಕ್ಕಿದೆ. ಇಂದಿನಿಂದ ಸಾರ್ವಜನಿಕರು ಮನೆಗಳಲ್ಲಿ ವರ್ಣರಂಜಿತ ಹೂವಿನ ರಂಗೋಲಿ ಬಿಡಿಸಲಾರಂಭಿಸಿದ್ದು, ತ್ರಿಪುನಿತುರಾದಲ್ಲಿ ಸಾಂಸ್ಕೃತಿಕ 'ಅತ್ತಚಮಯಂ' ಮೆರವಣಿಗೆ ಜರುಗಲಿದೆ. ಇನ್ನು ಶಬರಿಮಲೆ ದೇವಾಲಯದ ಬಾಗಿಲು ಇಂದು ತೆರೆಯಲಿದ್ದು, ಇದೇ ೨೪ ರಿಂದ ೨೮ ರವರೆಗೆ ವಿಶೇಷ ಓಣಂ ಪೂಜೆಗಳು ನಡೆಯಲಿವೆ.

<><><><>

ಜಾರ್ಖಂಡ್ ಲೋಕಸೇವಾ ಆಯೋಗ- ಜೆಪಿಎಸ್‌ಸಿ ಮತ್ತು ಸಿಬ್ಬಂದಿ ನೇಮಕಾತಿ ಆಯೋಗ- ಜೆಎಸ್‌ಎಸ್‌ಸಿ ನಡೆಸಿದ ಪರೀಕ್ಷೆಗಳಲ್ಲಿ ನಡೆದಿರುವ ಅಕ್ರಮ ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ಖಂಡಿಸಿ ವಿದ್ಯಾರ್ಥಿಗಳು ನಡೆಸುತ್ತಿರುವ ಪ್ರತಿಭಟನೆ ಇಂದು ೨೩ನೇ ದಿನಕ್ಕೆ ಕಾಲಿಟ್ಟಿದೆ. ಸರ್ಕಾರ ತಮ್ಮ ಬೇಡಿಕೆಗಳಿಗೆ ಸ್ಪಂದಿಸದಿರುವುದನ್ನು ಖಂಡಿಸಿ ಪ್ರತಿಭಟನಾಕಾರರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೋರೆನ್ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಕಳೆದ ೨೨ ದಿನಗಳಿಂದ ಗಾಂಧಿವಾದಿ ಮಾರ್ಗದಲ್ಲಿ ಶಾಂತಿಯುತವಾಗಿ ಹೋರಾಟ ನಡೆಸುತ್ತಿದ್ದರೂ ಸರ್ಕಾರ ಈ ಕುರಿತು ನಿರ್ಲಕ್ಷ್ಯ ವಹಿಸಿದೆ ಎಂದು ವಿದ್ಯಾರ್ಥಿ ಮುಖಂಡ ರವೀಂದ್ರ ಕುಮಾರ್ ಪಾಸ್ವಾನ್ ತಿಳಿಸಿದ್ದಾರೆ. ಜೆಎಸ್‌ಎಸ್‌ಸಿ

ಪರೀಕ್ಷೆಯನ್ನು ರದ್ದುಗೊಳಿಸಿ ಸಿಬಿಐ ತನಿಖೆಗೆ ಆದೇಶಿಸುವವರೆಗೆ ಹಾಗೂ ಟಿಡಿಪಿಎಲ್ ನಡೆಸಿದ ಪರೀಕ್ಷೆಗಳನ್ನು ರದ್ದುಪಡಿಸುವವರೆಗೆ ಹೋರಾಟ ಮುಂದುವರಿಯಲಿದೆ ಎಂದಿದ್ದಾರೆ.

<><><><>

ಪಶ್ಚಿಮ ಬಂಗಾಳ ವಿಧಾನಸಭೆಯ ಮಾಜಿ ಉಪ ಸಭಾಧ್ಯಕ್ಷ ಹಾಗೂ ತೃಣಮೂಲ ಕಾಂಗ್ರೆಸ್‌ನ ಮಾಜಿ ಶಾಸಕ ಆಶೀಶ್ ಬ್ಯಾನರ್ಜಿ ಅವರು ಬಿರ್ಭುಮ್ ಜಿಲ್ಲೆಯ ರಾಂಪುರಹತ್‌ನಲ್ಲಿರುವ ತಮ್ಮ ಗೃಹ ಕಚೇರಿಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಸ್ಥಳದಲ್ಲಿ ಒಂದು ಪುಟದ ಡೆತ್‌ನೋಟ್ ದೊರೆತಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ. ಬಂಗಾಳಿ ಭಾಷೆಯಲ್ಲಿ ಬರೆದಿರುವ ಈ ಪತ್ರದಲ್ಲಿ, ತಾವು ಯಾವುದೇ ಭ್ರಷ್ಟಾಚಾರದಲ್ಲಿ ತೊಡಗಿಸಿಕೊಂಡಿಲ್ಲ ಎಂದು ಸ್ಪಷ್ಟಪಡಿಸಿರುವ ಅವರು, ತಮ್ಮ ಸ್ವಪಕ್ಷದವರಿಂದಲೇ ತಮಗಾದ ನೋವು ಮತ್ತು ರಾಜಕೀಯ ಹತಾಶೆಯನ್ನು ತೋಡಿಕೊಂಡಿದ್ದಾರೆ.

<><><><>

ಫ್ರಾನ್ಸ್‌ನ ಪ್ಯಾರಿಸ್‌ನಲ್ಲಿ ನಡೆದ ಇ-ಸ್ಪೋರ್ಟ್ಸ್ ವಿಶ್ವಕಪ್ ಚೆಸ್ ಟೂರ್ನಿಯಲ್ಲಿ ವಿಶ್ವದ ಅಗ್ರ ಶ್ರೇಯಾಂಕಿತ ಆಟಗಾರ ಮ್ಯಾಗ್ನಸ್ ಕಾರ್ಲ್‌ಸನ್, ಬೆಲಾರಸ್‌ನ ಗ್ರ್ಯಾಂಡ್‌ಮಾಸ್ಟರ್ ಡೆನಿಸ್ ಲಾಜಾವಿಕ್ ಅವರನ್ನು ೧-೦ ಅಂತರದಿಂದ ಸೋಲಿಸಿ ಸತತ ಎರಡನೇ ಬಾರಿಗೆ ಪ್ರಶಸ್ತಿ ಮುಡಿಗೇರಿಸಿಕೊಂಡಿದ್ದಾರೆ. ಟೀಮ್ ಲಿಕ್ವಿಡ್ ಪ್ರತಿನಿಧಿಸಿದ್ದ ೩೫ ವರ್ಷದ ನಾರ್ವೆ ಆಟಗಾರ ಕಾರ್ಲ್‌ಸನ್ ಇಡೀ ಟೂರ್ನಿಯುದ್ದಕ್ಕೂ ಅಜೇಯರಾಗಿ ಉಳಿದು ಈ ಸಾಧನೆ ಮಾಡಿದರು. ಇನ್ನೊಂದೆಡೆ, ತಾಂತ್ರಿಕ ಅಡಚಣೆ ಮತ್ತು ಅಂತರ್ಜಾಲ ಸಂಪರ್ಕ ಕಡಿತದಿಂದಾಗಿ ತೀವ್ರ ಕುತೂಹಲ ಕೆರಳಿಸಿದ್ದ ಮೂರನೇ ಸ್ಥಾನದ ಪಂದ್ಯದಲ್ಲಿ ಅಮೆರಿಕದ ಗ್ರ್ಯಾಂಡ್‌ಮಾಸ್ಟರ್ ಹಿಕಾರು ನಕಾಮುರಾ ಅವರು ಅಲಿರೆಜಾ ಫಿರೌಜ್ಜಾ ಅವರನ್ನು ೪-೯ ಅಂತರದಿಂದ ಮಣಿಸಿ ಕಂಚಿನ ಪದಕ ಪಡೆದುಕೊಂಡರು.

<><><><>

ಶ್ರೀಲಂಕಾದ ಗಾಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ-ಶ್ರೀಲಂಕಾ ನಡುವಿನ ಮೊದಲ ಟೆಸ್ಟ್ ಪಂದ್ಯದ ಎರಡನೇ ದಿನದಾಟ ಇಂದು ಆರಂಭವಾಗುವ ಮೊದಲೇ ಪಂದ್ಯಕ್ಕೆ ಮಳೆ ಅಡ್ಡಿ ಉಂಟುಮಾಡಿದೆ.
ಮೊದಲ ದಿನವಾದ ನಿನ್ನೆ ಭಾರತ ೧೮೮ ರನ್‌ಗಳಿಗೆ ೧ ವಿಕೆಟ್ ಕಳೆದುಕೊಂಡಿತ್ತು. ದಿನದಾಟದ ಅಂತ್ಯಕ್ಕೆ ದೇವದತ್ ಪಡಿಕ್ಕಲ್ ೯೩೯ ರನ್ ಗಳಿಸಿ, ಅಜೇಯರಾಗಿ ಉಳಿದಿದ್ದು, ೧೭ ರನ್ ಗಳಿಸಿರುವ ರಿಷಬ್ ಪಂತ್ ಅವರೊಂದಿಗೆ ಕಣದಲ್ಲಿದ್ದಾರೆ.  ಕೆ.ಎಲ್.ರಾಹುಲ್ ೭೭ ರನ್  ಗಳಿಸಿದ್ದ ವೇಳೆ ಗಾಯಗೊಂಡು ಕಣದಿಂದ ಹೊರನಡೆದರು. ನಿನ್ನೆ ಮಳೆಯ ನಡುವೆ ಮೊದಲ ದಿನದಾಟವನ್ನು ಕೇವಲ ೭೩ ಓವರ್‌ಗಳಿಗೆ ಸೀಮಿತಗೊಳಿಸಲಾಗಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>